## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ ನಿಯಮಿತದ ವ್ಯಾಪ್ತಿಯಲ್ಲಿ 2022-23ನೇ ಸಾಲಿನಲ್ಲಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕ್ರಿಯಾ ಯೋಜನೆಗೆ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:-** ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ ನಿಯಮಿತ ಇವರ ಪ್ರಸ್ತಾವನೆ ಸಂಖ್ಯೆ:ಕವಿಲಿಅನಿ/ಸಿ-1/ಸಿಆರ್-14/2022-23 ದಿನಾಂಕ:10.10.2022

******

**ಪ್ರಸ್ತಾವನೆ:-**

ಮೇಲೆ ಓದಲಾದ ಪ್ರಸ್ತಾವನೆಯಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ಕಾರ್ಯಕ್ರಮಗಳಿಗೆ 2022-23ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕಶೀರ್ಷಿಕೆ: 2225-03-190-0-09-100 ರಡಿಯಲ್ಲಿ ರೂ.10000.00ಲಕ್ಷಗಳ ಅನುದಾನವನ್ನು ಹಂಚಿಕೆ ಮಾಡಲಾಗಿರುತ್ತದೆ. 2021-22ನೇ ಸಾಲಿನಲ್ಲಿ ಉಳಿಕೆಯಾದ ಅನುದಾನ ರೂ.9750.00 ಲಕ್ಷಗಳು ಸೇರಿ ಒಟ್ಟು ರೂ.19550.00 ಲಕ್ಷಗಳ ಅನುದಾನದಲ್ಲಿ 2022-23ನೇ ಸಾಲಿನಲ್ಲಿ ನಿಗಮವು ಕ್ರಿಯಾಯೋಜನೆಯನ್ನು ರೂಪಿಸಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಉದ್ದೇಶಿಸಲಾಗಿದ್ದು, ಸದರಿ ವಿಷಯವನ್ನು ದಿನಾಂಕ:12.09.2022 ರಂದು ಜರುಗಿದ 06 ನೇ ನಿರ್ದೇಶಕರ ಮಂಡಳಿ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆಯಲಾಗಿದ್ದು, ಅದರಂತೆ ಈ ಕೆಳಕಂಡ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

| ಕ್ರ. ಸಂ | ಯೋಜನೆಯ ಹೆಸರು | ಭೌತಿಕ ಗುರಿ | ಆರ್ಥಿಕ (ರೂ.ಲಕ್ಷಗಳಲ್ಲಿ) |
|---|---|---|---|
| 1 | ಬಸವ ಬೆಳಗು | 1793 | 1793.00 |
| 2 | ವಿದೇಶ ವಿದ್ಯಾವಿಕಾಸ | 224 | 784.00 |
| 3 | ಕಾಯಕ ಕಿರಣ | 1344 | 1344.00 |
| 4 | ಜೀವಜಲ | 1586 | 4247.00 |
| 5 | ಸ್ವ-ಸಹಾಯ ಸಂಘಗಳಿಗೆ ಉತ್ತೇಜನ | 3360 | 504.00 |
| 6 | ಪರಿಪೂರ್ಣದೆಡೆಗೆ | 64 | 76.80 |
| 7 | ಶರಣ-ಸೇನೆ | 160 | 51.20 |
| 8 | ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ | 10000 | 1000 |
| 9 | **2021-22ನೇ ಸಾಲಿನ ಉಳಿಕೆ ಮೊತ್ತ** | - | **9750.00** |
| | **ಒಟ್ಟು** | **18531** | **19550.00** |

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 637 ಬಿಎಂಎಸ್ 2022,**
**ಬೆಂಗಳೂರು, ದಿನಾಂಕ:13-10-2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮವು ಅನುಷ್ಠಾನಗೊಳಿಸಲು ಉದ್ದೇಶಿಸಿರುವ ಈ ಕೆಳಕಂಡ ಕಾರ್ಯಕ್ರಮಗಳನ್ನು 2022-23ನೇ ಸಾಲಿನಲ್ಲಿ ಮುಂದುವರೆಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮತಿ ನೀಡಿ ಆದೇಶಿಸಲಾಗಿದೆ.

13/10/22 ...2

| ಕ್ರ. ಸಂ | ಯೋಜನೆಯ ಹೆಸರು |
|---|---|
| 1 | ಬಸವ ಬೆಳಗು |
| 2 | ವಿದೇಶ ವಿದ್ಯಾವಿಕಾಸ |
| 3 | ಕಾಯಕ ಕಿರಣ |
| 4 | ಜೀವಜಲ |
| 5 | ಸ್ವ-ಸಹಾಯ ಸಂಘಗಳಿಗೆ ಉತ್ತೇಜನ |
| 6 | ಪರಿಪೂರ್ಣದೆಡೆಗೆ |
| 7 | ಶರಣ-ಸೇನೆ |
| 8 | ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ |

**ಷರತ್ತುಗಳು :-**

1. ಸದರಿ ಯೋಜನೆಗಳಿಗೆ ಕರ್ನಾಟಕ ಸರ್ಕಾರದ ಸುವಿಧಾ ಪೋರ್ಟಲ್ ಮುಖಾಂತರ ಆನ್‌ಲೈನ್ ವಿಧಾನದಲ್ಲಿ ಅರ್ಜಿಗಳನ್ನು ಪಡೆಯತಕ್ಕದ್ದು. ಅರ್ಜಿಗಳನ್ನು ಆಹ್ವಾನಿಸಲು ನಿಗಮವು ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಕನಿಷ್ಠ 45 ದಿನಗಳ ಕಾಲಾವಕಾಶ ನೀಡುವುದು.
2. ಸದರಿ ಯೋಜನೆಗಳನ್ನು ಸೆಕ್ಷನ್ 7 ಆಧಾರ್ ಕಾಯ್ದೆ ಅಡಿಯಲ್ಲಿ ಅಧಿಸೂಚಿಸಲಾಗಿರುವುದರಿಂದ ಕಡ್ಡಾಯವಾಗಿ ಫಲಾನುಭವಿಯ ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ಅನುದಾನ ಸಂದಾಯವಾಗಬೇಕು.
3. ಸದರಿ ಯೋಜನೆಗಳ ಮಾರ್ಗಸೂಚಿಯಲ್ಲಿ ಸರ್ಕಾರವು ಏನೇ ಬದಲಾವಣೆ ಮಾಡಿದ್ದಲ್ಲಿ ಆ ದಿನದಿಂದಲೇ ಬದಲಾವಣೆ ಆಗುವ ಮಾರ್ಗಸೂಚಿಗಳ ಅನುಸಾರ ಯೋಜನೆಗಳನ್ನು ಅನುಷ್ಠಾನಮಾಡುವುದು.
4. ನಿಗಮದ ಹಂತದಲ್ಲಿ ಯಾವುದೇ ಯೋಜನೆಯನ್ನು ಬದಲಾವಣೆ ಮಾಡಬೇಕಾದಲ್ಲಿ ಸರ್ಕಾರದ ಪೂರ್ವಾನುಮೋದನೆ ಕಡ್ಡಾಯವಾಗಿ ಪಡೆಯತಕ್ಕದ್ದು.
5. ನಿಗಮಕ್ಕೆ ಒದಗಿಸಲಾಗಿರುವ ಅನುದಾನದ ಮಿತಿಯಲ್ಲಿಯೇ ಯೋಜನೆಗಳನ್ನು ಅನುಷ್ಠಾನ ಮಾಡುವುದು.
6. ಯೋಜನಾವಾರು ಸ್ವೀಕೃತವಾದ ಅರ್ಜಿಗಳ ಸಂಖ್ಯೆ, ಆಯ್ಕೆ ಪ್ರಕ್ರಿಯೆಯ ವಿವರಗಳು ಹಾಗೂ ಆರ್ಥಿಕ ಮತ್ತು ಭೌತಿಕ ಪ್ರಗತಿಯ ತಾಲ್ಲೂಕುವಾರು, ಜಿಲ್ಲಾವಾರು ಮಾಹಿತಿಯನ್ನು ನಿಗಮದ ಜಾಲತಾಣದಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಕಡ್ಡಾಯವಾಗಿ ವ್ಯವಸ್ಥಾಪಕ ನಿರ್ದೇಶಕರು ಅಳವಡಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Shaheenparveen 13/10/2022

**(ಷಾಹೀನ್ ಪರ್ವೀನ್.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು,(ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.

3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
4. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.

<u>ಪ್ರತಿ ಮಾಹಿತಿಗಾಗಿ:-</u>

1. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಅಧೀನ ಕಾರ್ಯದರ್ಶಿ 1 & 2 ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ .

**************